ಈ) ಬಡ ಪ್ರತಿಭಾವಂತ ವಿದ್ಯಾರ್ಥಿಗಳು ವೃತ್ತಿಶಿಕ್ಷಣ ಪಡೆಯಲು ಬ್ಯಾಂಕುಗಳಿಂದ ಪಡೆಯುವ ಶೈಕ್ಷಣಿಕ ಸಾಲಗಳ ಮೇಲೆ ಅಭ್ಯರ್ಥಿಯು ಶೇಕಡ 6 ರಷ್ಟು ಬಡ್ಡಿಯನ್ನು ಸರ್ಕಾರವು ಭರಿಸುತ್ತದೆ.

ಪ್ರೌಢ ಶಾಲೆ ಮತ್ತು ಕಾಲೇಜು ಸಮಸ್ಯೆ

754 (1091) ಶ್ರೀ ಜಯಚಂದ್ರ ಟಿ.ಬಿ (ಶಿರಾ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿರಾ ತಾಲ್ಲೂಕು ಚಿಕ್ಕನಹಳ್ಳಿಯ ಶ್ರೀ ಉಗ್ರೇಗೌಡರ ಧರ್ಮಾರ್ಥ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢ ಶಾಲೆ ವಿಭಾಗಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿ ಮರಗಳ ಕೆಳಗೆ ತರಗತಿಗಳು ನಡೆಯುತ್ತಿದ್ದು ಈ ಸಾಲಿನಲ್ಲೇ ಹೆಚ್ಚುವರಿ ಕೊಠಡಿಗಳನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳುವರೇ?

ಆ) ಗ್ರಾಮಾಂತರ ಪ್ರದೇಶದ ರೈತ ಮಕ್ಕಳ ಉನ್ನತ ಶಿಕ್ಷಣಕ್ಕೆ ಅನುಕೂಲವಾಗಲು ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ವಿಜ್ಞಾನ ವಿಭಾಗ ಮಂಜೂರು ಮಾಡಲು ಕ್ರಮ ಕೈಗೊಳ್ಳುವರೇ;

ಇ) ಈ ಹೈಸ್ಕೂಲ್ ವಿಭಾಗದಲ್ಲಿ 20 ವರ್ಷಗಳಿಂದಲೂ ಅನಗತ್ಯವಾಗಿರುವ ತೋಟಗಾರಿಕೆ ಶಿಕ್ಷಕರ ಹುದ್ದೆಯನ್ನು ರದ್ದುಗೊಳಿಸಿ ಅಗತ್ಯವಾದ ಚಿತ್ರಕಲಾ ಶಿಕ್ಷಕರ ಹುದ್ದೆಯನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳುವರೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಶಿರಾ ತಾಲ್ಲೂಕು ಚಿಕ್ಕನಹಳ್ಳಿ ಶ್ರೀ ಉಗ್ರೇಗೌಡ ಸ್ಮಾರಕ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಒಟ್ಟು 10 ಕೊಠಡಿಗಳು ಲಭ್ಯವಿರುತ್ತದೆ. ಅದರಲ್ಲಿ 4 ಕೊಠಡಿಗಳನ್ನು ಪ್ರೌಢಶಾಲೆಗೆ ಬಳಸಿಕೊಳ್ಳುತ್ತಿದ್ದು, 1 ಕೊಠಡಿಯನ್ನು ಗಣಕಯಂತ್ರದ ಕೊಠಡಿಯನ್ನಾಗಿ ಬಳಸಲಾಗುತ್ತಿದೆ. 5 ಕೊಠಡಿಗಳನ್ನು ಪದವಿ ಪೂರ್ವ ಕಾಲೇಜಿಗೆ ಬಳಸಿಕೊಳ್ಳಲಾಗುತ್ತಿದೆ.

04 ಕೊಠಡಿಗಳು ಹೆಚ್ಚುವರಿಯಾಗಿ ಬೇಕಾಗಿರುತ್ತದೆ. ಈ ಕೊಠಡಿಗಳನ್ನು ಅನುದಾನದ ಲಭ್ಯತೆಯನ್ನು ಆಧರಿಸಿ ವಿಶೇಷ ಅಭಿವೃದ್ಧಿ ಅನುದಾನದಡಿ ಅಥವಾ ಆರ್.ಐ.ಡಿ.ಎಫ್ ಅಡಿಯಲ್ಲಿ ಒದಗಿಸಲಾಗುವುದು.

ಆ) 2010–11ನೇ ಸಾಲಿಗೆ ಮಂಜೂರು ಮಾಡಲಾಗುವುದು.

ಇ) ಶಿರಾ ತಾಲ್ಲೂಕು ಸರ್ಕಾರಿ ಪದವಿ ಪೂರ್ವ ಕಾಲೇಜು ಚಿಕ್ಕನಹಳ್ಳಿ ಇಲ್ಲಿ ಸುಮಾರು 05 ಎಕರೆ ಜಮೀನು ಇದ್ದು, ತೋಟಗಾರಿಕೆ ಶಿಕ್ಷಕರು ಹಾಲಿ ಕೆಲಸ ನಿರ್ವಹಿಸುತ್ತಿದ್ದಾರೆ.

ವಿಶೇಷ ಶಿಕ್ಷಕರ ಹುದ್ದೆಗಳಲ್ಲಿ ಶಾಲೆಗೆ ಒಂದು ಹುದ್ದೆಯನ್ನು ಮಾತ್ರ ಮಂಜೂರು ಮಾಡಬೇಕಾಗಿರುವುದರಿಂದ ಹಾಲಿ ಕಾರ್ಯ ನಿರ್ವಹಿಸುತ್ತಿರುವ ತೋಟಗಾರಿಕಾ ಶಿಕ್ಷಕರ ಹುದ್ದೆಯನ್ನು ರದ್ದು ಪಡಿಸಿ, ಚಿತ್ರಕಲಾ ಶಿಕ್ಷಕರ ಹುದ್ದೆಯನ್ನು ಸೃಜಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಪ್ರೌಢ ಶಾಲೆಗಳ ಮಂಜೂರಾತಿಯ ಬಗ್ಗೆ

755 (570) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹೊಸದಾಗಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಪ್ರಸ್ತಾವನೆಯು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಪ್ರೌಢಶಾಲೆಗಳನ್ನು ಪ್ರಸಕ್ತ ಸಾಲಿನಲ್ಲಿ ಅಥವಾ ಮುಂದಿನ ವರ್ಷದಲ್ಲಿ ಪ್ರಾರಂಭಿಸಲಾಗುವುದೇ;

ಆ) ಕೊಪ್ಪಳ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕುಣಿಕೇರಿ, ಚಿಲವಾಡಗಿ, ಹಟ್ಟಿ ಮತ್ತು ಹಲವಾಗಿಲು ಗ್ರಾಮಗಳಲ್ಲಿ ಪ್ರೌಢಶಾಲೆಗಳಿಗೆ ಬೇಡಿಕೆ ಇದೆಯೇ; ಈ ಬೇಡಿಕೆಗೆ ಸರ್ಕಾರವು ತೆಗೆದುಕೊಂಡು ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬಂದಿದೆ.

ಅನುದಾನ ಹಾಗೂ ಅವಶ್ಯಕತೆಯನ್ನು ಆಧರಿಸಿ ಪ್ರೌಢ ಶಾಲೆಗಳನ್ನು ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ.